# 450 ಹೆಚ್ಚುವರಿ ವೈದ್ಯಕೀಯ ಸೀಟು ಸಾಧ್ಯತೆ

ಬೆಂಗಳೂರು: ಪ್ರಸಕ್ತ ಸಾಲಿನಲ್ಲಿ ರಾಜ್ಯದ ಸರ್ಕಾರಿ ವೈದ್ಯಕೀಯ ಕಾಲೇಜುಗಳಲ್ಲಿ 450 ಹೆಚ್ಚುವರಿ ಸೀಟುಗಳಿಗೆ ಭಾರತೀಯ ವೈದ್ಯಕೀಯ ಮಂಡಳಿಯಿಂದ ಅನುಮತಿ ಸಿಗುವ ಸಾಧ್ಯತೆ ಇದೆ.

ಹುಬ್ಬಳ್ಳಿ, ಹಾಸನ ಮತ್ತು ಮೈಸೂರು ಜಿಲ್ಲೆಯ ಸರ್ಕಾರಿ ವೈದ್ಯಕೀಯ ಕಾಲೇಜುಗಳಿಗೆ ತಲಾ 100 ಸೀಟುಗಳನ್ನು ಹೆಚ್ಚುವರಿಯಾಗಿ ನೀಡಬೇಕೆಂದು ವೈದ್ಯ ಕೀಯ ಶಿಕ್ಷಣ ಇಲಾಖೆ ಬೇಡಿಕೆ ಸಲ್ಲಿಸಿತ್ತು.

ಇಲಾಖೆಯ ಬೇಡಿಕೆಯನ್ನು ಪರಿಗಣಿಸಿ ಭಾರತೀಯ ವೈದ್ಯಕೀಯ ಮಂಡಳಿಯ ಆಡಳಿತ ,ಮಂಡಳಿ ಪರಿಶೀಲನೆ ಕೈಗೆತ್ತಿಕೊಂಡಿದ್ದು, ಜೂನ್‌ನಲ್ಲಿ ಅಂತಿಮ ತೀರ್ಮಾನ ತಿಳಿಸಲಿದೆ. ರಾಜ್ಯದಲ್ಲಿ 18 ಸರ್ಕಾರಿ ವೈದ್ಯಕೀಯ ಕಾಲೇಜುಗಳಿವೆ. ಇವುಗಳಲ್ಲಿ ಹೊಸದಾಗಿ ಪ್ರಾರಂಭಿಸಿದ ಕಾಲೇಜುಗಳು ಮಾನದಂಡಗಳನ್ನು ಪೂರ್ಣಗೊಳಿಸದೆ ಇರುವ ಅವುಗಳ ಸೀಟಿನ ಬೇಡಿಕೆಯಿಂದ ಹೊರಗಿಡಲಾಗಿದೆ.

ಬೆಂಗಳೂರು ವೈದ್ಯಕೀಯ ಕಾಲೇಜು ಬಿಟ್ಟು ಇನ್ನುಳಿದ ಕಾಲೇಜುಗಳಿಗೆ ಸೀಟು ಬೇಕೆಂದು ಮನವಿ ಮಾಡಿದೆ ವೈದ್ಯಕೀಯ ಶಿಕ್ಷಣ ಇಲಾಖೆ. ಬೌರಿಂಗ್ ಮತ್ತು ಕರ್ಜನ್ ಆಸ್ಪತ್ರೆ ಆವರಣದ 138 ಎಕರೆಯಲ್ಲಿ 197 ಕೋಟಿ ವೆಚ್ಚದಲ್ಲಿ ಹೊಸ ವೈದ್ಯಕೀಯ ಕಾಲೇಜು ಪ್ರಾರಂಭವಾಗಲಿದ್ದು, 150 ಸೀಟುಗಳು ಪಡೆಯುವ ನಿರೀಕ್ಷೆಯಲ್ಲಿದೆ.